# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ರಾಜ್ಯದ ಜಿಲ್ಲಾ ಉಪ ನಿರ್ದೇಶಕರುಗಳು ಪದವಿ ಪೂರ್ವ ಹಾಗೂ ವೃತ್ತಿ ಶಿಕ್ಷಣ ಇಲಾಖೆ, ಇವರುಗಳ ಕಾರ್ಯ ನಿರ್ವಹಣಾ ವರದಿ (Performance Report) ಯನ್ನು ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರಿಗೆ ಅಧಿಕಾರವನ್ನು ನೀಡುವ ಬಗ್ಗೆ.

**ಓದಲಾಗಿದೆ:–**
1. ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರ ಪತ್ರ ಸಂಖ್ಯೆ:ಅವಿ2/ಡಿವಿಇ/ಶಿಸ್ತು ಪ್ರಕರಣ/06–07/389, ದಿನಾಂಕ:07/03/2007.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 08 ಡಿಜಿಎಂ 2007, ದಿನಾಂಕ:24/03/2007.
3. ಸರ್ಕಾರದ ತಿದ್ದುಪಡಿ ಸಂಖ್ಯೆ:ಇಡಿ 08 ಡಿಜಿಎಂ 2007, ದಿನಾಂಕ:31/05/2007.

**ಪ್ರಸ್ತಾವನೆ:–**

ಮೇಲೆ ಓದಲಾದ ದಿನಾಂಕ:07/03/2007 ರ ಪತ್ರದಲ್ಲಿ ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರು ರಾಜ್ಯದಲ್ಲಿ ಒಟ್ಟು 548 ಪದವಿ ಪೂರ್ವ ಕಾಲೇಜು / ಪಾಲಿಟೆಕ್ನಿಕ್‌ಗಳಲ್ಲಿ ವೃತ್ತಿ ಶಿಕ್ಷಣ ಇಲಾಖೆಯಿಂದ ವೃತ್ತಿ ಶಿಕ್ಷಣ ಕೋರ್ಸ್‌ಗಳನ್ನು ನಡೆಸುತ್ತಿದ್ದು, ಪರೀಕ್ಷಾ ಕಾರ್ಯಗಳು, ಈ ವೃತ್ತಿ ಶಿಕ್ಷಣ ಕಾಲೇಜುಗಳ ಉಸ್ತುವಾರಿ, ಅನುದಾನ ಬಿಡುಗಡೆ, ಆಡಳಿತಾತ್ಮಕ ವಿಷಯಗಳು, ಇಲಾಖಾ / ಸರ್ಕಾರದ ಆದೇಶ / ಸುತ್ತೋಲೆಗಳನ್ನು ಜಾರಿಗೊಳಿಸುವ ಕಾರ್ಯ ಹಾಗೂ ವೃತ್ತಿ ಶಿಕ್ಷಣಕ್ಕೆ ಸಂಬಂಧಿಸಿದ ಎಲ್ಲಾ ಕಾರ್ಯಗಳು ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಪ ನಿರ್ದೇಶಕರುಗಳು ಪದವಿ ಪೂರ್ವ ಹಾಗೂ ವೃತ್ತಿ ಶಿಕ್ಷಣ ಇಲಾಖೆ, ಇವರುಗಳ ಕಾರ್ಯ ವ್ಯಾಪ್ತಿಗೆ ಒಳಪಟ್ಟಿದ್ದು, ವೃತ್ತಿ ಶಿಕ್ಷಣವನ್ನು ಉನ್ನತ್ತೀಕರಿಸರುವ ಸಂಬಂಧ ಇಲಾಖೆ / ನೌಕರರ ಯಾವುದೇ ನೀತಿ / ಯೋಜನೆಗಳನ್ನು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಬೇಕಾದ ಕಾರ್ಯದಲ್ಲಿ ಇವರುಗಳ ಪಾತ್ರ ಪ್ರಮುಖವಾಗಿದ್ದು, ಜಿಲ್ಲಾ ಮಟ್ಟದಲ್ಲಿ ಇವರ ಪೂರ್ಣ ಸಹಕಾರ ಅಗತ್ಯವಾಗಿದ್ದು, ಅನೇಕ ಸಂದರ್ಭಗಳಲ್ಲಿ ಜಿಲ್ಲಾ ಉಪ ನಿರ್ದೇಶಕರುಗಳು ಅಸಹಕಾರ ಕರ್ತವ್ಯ ನಿರ್ಲಕ್ಷತೆಯಿಂದ ಇಲಾಖೆಯ ಪರೀಕ್ಷೆ, ಆಡಳಿತಾತ್ಮಕ ಹಾಗೂ ಇಲಾಖೆಯ ಪ್ರಗತಿಪರ ಕ್ರಮಬದ್ಧ ಕಾರ್ಯಗಳಿಗೆ ಅಡಚಣೆಯಾಗುತ್ತಿದ್ದು, ಜಿಲ್ಲಾ ಉಪ ನಿರ್ದೇಶಕರುಗಳು ಪದವಿ ಪೂರ್ವ ಹಾಗೂ ವೃತ್ತಿ ಶಿಕ್ಷಣ ಇಲಾಖೆ, ಇವರುಗಳ ಸೇವಾ ವಿಚಾರ, ಶಿಸ್ತು ಕ್ರಮಗಳ ಕಾರ್ಯಗಳು, ಪದವಿ ಪೂರ್ವ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿಗೆ ಒಳಪಟ್ಟಿದ್ದು, ಇಲಾಖೆಗೆ ಶಿಸ್ತು ಪ್ರಾಧಿಕಾವಾಗಿಲ್ಲದೇ ಇರುವುದರಿಂದ ಹಾಗೂ ಇವರುಗಳ ಯಾವುದೇ ಸೇವಾ ವಿಚಾರಗಳು ವೃತ್ತಿ ಶಿಕ್ಷಣ ನಿರ್ದೇಶನಾಲಯದ ಕಾರ್ಯ ವ್ಯಾಪ್ತಿಗೆ ಒಳಪಡುವುದಿಲ್ಲವಾದ್ದರಿಂದ ಕರ್ತವ್ಯ ನಿರ್ಲಕ್ಷತೆ ಹಾಗೂ ಅಸಹಕಾರಕ್ಕೆ ಕಾರಣವಾಗಿದ್ದು, ವೃತ್ತಿ ಶಿಕ್ಷಣ ಕೋರ್ಸ್ ನಡೆಸುತ್ತಿರುವ ಪದವಿ ಪೂರ್ವ ಕಾಲೇಜು, ಪ್ರಾಂಶುಪಾಲರುಗಳ ನಿರ್ಲಕ್ಷತೆಯ ಹಾಗೂ ಅಸಹಕಾರ ಪ್ರಕರಣಗಳಲ್ಲಿ ದಂಡನೆಗಳನ್ನು ವಿಧಿಸಿ ಶಿಸ್ತು ಕ್ರಮ ಜರುಗಿಸಲು ವೃತ್ತ ಶಿಕ್ಷಣ ನಿರ್ದೇಶಕರಿಗೆ ಅಧಿಕಾರ ನೀಡಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಅಫೀಲ್) ನಿಯಮಗಳಿಗೆ ಸೂಕ್ತ ತಿದ್ದುಪಡಿ ಮಾಡಿ ಆದೇಶ ಹೊರಡಿಸುವಂತೆ ಹಾಗೂ ಪ್ರತಿ ವರ್ಷ ಪದವಿ ಪೂರ್ವ ಹಾಗೂ ವೃತ್ತಿ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರುಗಳ ಕಾರ್ಯ ನಿರ್ವಹಣಾ ವರದಿ (Performance Report) ಯನ್ನು ವೃತ್ತಿ ಶಿಕ್ಷಣ ಇಲಾಖೆಯ ನಿರ್ದೇಶಕರಿಂದ ಪಡೆಯುವುದು ಕಡ್ಡಾಯಗೊಳಿಸಲು ನಿರ್ದೇಶಕರಿಗೆ ಅಧಿಕಾರ ನೀಡುವಂತೆ ಕೋರಿರುತ್ತಾರೆ.

2. ಮೇಲೆ (2) ರಲ್ಲಿ ಓದಲಾದ ದಿನಾಂಕ:24/03/2007 ರ ಆದೇಶದಲ್ಲಿ ಕರ್ನಾಟಕ ಸಿವಿಲ್ ಸೇವೆಗಳು (ಕಾರ್ಯ ನಿರ್ವಹಣಾ ವರದಿಗಳು) ನಿಯಮಗಳು 2000 ರನ್ವಯ ಪದವಿ ಪೂರ್ವ ಶಿಕ್ಷಣ ಇಲಾಖೆಯ, ವಿವಿಧ ವೃಂದದ ಅಧಿಕಾರಿಗಳಿಗೆ ವರದಿ ಬರೆಯುವ, ಪುನರಾವಲೋಕನ ಮತ್ತು ಅಂಗೀಕಾರ ಪ್ರಾಧಿಕಾರಗಳನ್ನು ಈಗಾಗಲೇ ರಚಿಸಲಾಗಿದೆ. ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಇಡಿ 159 ಡಿಪಿಐ 2007, ದಿನಾಂಕ:20/07/2007</u>**

3. ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರುಗಳ ವಿಶೇಷ ಕಾರ್ಯ ನಿರ್ವಹಣಾ ವರದಿ (Special Performance Report) ಯನ್ನು ವೃತ್ತಿ ಶಿಕ್ಷಣ ಇಲಾಖೆಯ ನಿರ್ದೇಶಕರಿಂದ ಪಡೆಯುವುದನ್ನು ಕಡ್ಡಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸ್ವರ್ಣಲತಾ.ಎಂ.ಭಂಡಾರೆ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸೇವೆಗಳು–1,2)

**<u>ಇವರಿಗೆ:–</u>**

1. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
2. ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
3. ಎಲ್ಲಾ ಸಹ ನಿರ್ದೇಶಕರು, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ.
4. ಎಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ.
5. ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ.
6. ಶಾಖಾರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.